ಆ) ಆರ್ಥಿಕ ಮಿತವ್ಯಯ ಸಡಿಲಿಕೆಯು ಪರಿಶೀಲನೆಯಲ್ಲಿದೆ

ಇ) ಅತಿಥಿ ಬೋಧಕರ ಸೇವೆಯನ್ನು ಉಪಯೋಗಿಸಿಕೊಂಡು ಪ್ರಸ್ತುತ ಸಂಸ್ಥೆಯಲ್ಲಿ ಅನುಷ್ಠಾನಗೊಳಿಸಲಾಗಿರುವ ವೃತ್ತಿಗಳಲ್ಲಿ ವ್ಯವಸ್ಥಿತವಾಗಿ ತರಬೇತಿ ನೀಡಲಾಗುತ್ತಿದೆ 1 25 ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ಪಠ್ಯಕ್ರಮ ಪ್ರಕಾರ ಯಂತ್ರೋಪಕರಣಗಳನ್ನು ಒದಗಿಸಲಾಗಿದೆ

617 (1073) ಶ್ರೀ ಪಾಟೀಲ್ ಡಿ ಆರ್ (ಗದಗ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೈದ್ಯಕೀಯ ಶಿಕ್ಷಣದಲ್ಲಿ ಪಿ ಜಿ ಪರೀಕ್ಷೆಯ ಫಲಿತಾಂಶದೊಂದಿಗೆ ರ್ಯಾಂಕ್ ಪಡೆದವರ ಪಟ್ಟಿಯನ್ನು ಪ್ರಕಟಿಸದಿರಲು ಕಾರಣವೇನು?

ಆ) ಪರೀಕ್ಷೆಯು ಫಲಿತಾಂಶ ಬಂದಾಗ ಉಳಿದೆಲ್ಲ ಸಂಬಂಧಿಸಿದ ವಿಶ್ವವಿದ್ಯಾಲಯಗಳ ರ್ಯಾಂಕ್ ಪಡೆದ ವಿದ್ಯಾರ್ಥಿಗಳ ಹೆಸರು ಮತ್ತು ಅಂಕಗಳನ್ನು ಪ್ರಕಟಿಸುವಾಗ ಇಲ್ಲಿಯೂ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುವುದೇ?

ಡಾ ಎ ಎಸ್ ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಅಭ್ಯರ್ಥಿಗಳು ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಪಾಸಾಗಲು ಕನಿಷ್ಠ 50 ಪ್ರತಿಶತ ಅಂಕಗಳನ್ನು ಪಡೆದಿರಬೇಕು, ಮೊದಲು ಶ್ರೇಣಿ ಗಳಿಸಲು ಕನಿಷ್ಠ 65 ಪ್ರತಿಶತ ಹಾಗೂ ಡಿಸ್ಟಿಂಕ್ಷನ್ ಗಳಿಸಲು ಕನಿಷ್ಠ 75 ಪ್ರತಿಶತ ಅಂಕಗಳನ್ನು ಪಡೆದಿರಬೇಕು

ವೈದ್ಯಕೀಯ ಶಿಕ್ಷಣದ ಸ್ನಾತಕೋತ್ತರ ಪದವಿಗಾಗಿ ಪ್ರತಿಯೊಂದು ವಿಷಯಗಳಲ್ಲಿ ವಿಶ್ವವಿದ್ಯಾಲಯದಡಿಯಲ್ಲಿ ಹತ್ತಕ್ಕಿಂತಲೂ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿರುತ್ತಾರೆ ಇಂಥ ಸಂದರ್ಭಗಳಲ್ಲಿ 50 ರಿಂದ 55 ಪ್ರತಿಶತ ಅಂಕಗಳನ್ನು ಗಳಿಸಿ ಪಾಸಾದ ಅಭ್ಯರ್ಥಿಗಳಿಗೂ ರ್ಯಾಂಕ್ ಕೊಡಬೇಕಾದ ಅನಿವಾರ್ಯತೆ ಬರುವುದರಿಂದ ವೈದ್ಯಕೀಯ ಶಿಕ್ಷಣದಲ್ಲಿ ಸ್ನಾತಕೋತ್ತರ ಪರೀಕ್ಷೆಯ ಫಲಿತಾಂಶದೊಂದಿಗೆ ರ್ಯಾಂಕ್ ಪಡೆದವರ ಪಟ್ಟಿಯನ್ನು ಪ್ರಕಟಿಸಲಾಗುತ್ತಿಲ್ಲ

ಆ) ಮತ್ತು ಇ) ಉಳಿದ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ವಿಷಯಗಳು ಕಡಿಮೆ ಇದ್ದು, ಪ್ರತಿಯೊಂದು ವಿಷಯದಲ್ಲಿಯೂ ವಿದ್ಯಾರ್ಥಿಗಳ ಸಂಖ್ಯೆ ಅಧಿಕವಾಗಿರುತ್ತದೆ

ಸದರಿ ವಿಷಯವನ್ನು ಎಲ್ಲಾ ಅಧ್ಯಯನ ಮಂಡಳಿ, ಅಕಾಡೆಮಿಕ್ ಕೌನ್ಸಿಲ್, ನಿಕಾಯ ಮುಖ್ಯಸ್ಥರು, ಸೆನೆಟ್ ಹಾಗೂ ಸಿಂಡಿಕೇಟ್ ಸಭೆಗಳಲ್ಲಿ ಮಂಡಿಸಿ ಈ ಸಭೆಗಳ ನಿರ್ದಾರದಂತೆ ಕ್ರಮ ಕೈಗೊಳ್ಳಲಾಗುವುದು